1) 5

2) ಜನವರಿ ಅಂತ್ಯದವರೆಗೂ 1,82,990-00 ರೂ.ಗಳನ್ನು ವಿಚ್ರು ಮಾಡಲಾಗಿದೆ. ನಾಲ್ಕು ವಸತಿ ಗೃಹಗಳು ಪೂರ್ಣಗೊಂಡಿದ್ದು ಅವುಗಳನ್ನು ಕೃಷಿ ಇಲಾಖೆ ವಹಿಸಿಕೊಂಡಿದೆ.

3) ಈ ಗ್ರಾಮದ ವಸತಿ ಗೃಹಕ್ಕೆ ಒಳಚರಂಡಿ ಸಂಪರ್ಕ ಹಾಗೂ ವಿದ್ಯುಚ್ಛಕ್ತಿ ನೀಡುವುದು ಮುಂತಾದ ಸಣ್ಣಪುಟ್ಟ ಕೆಲಸಗಳು ಬಾಕಿ ಇದ್ದು ಅಪೂರ್ಣವಾಗಿದೆ.

4) ಬಾಕಿ ಇರುವ ಸಣ್ಣಪುಟ್ಟ ಕೆಲಸಗಳನ್ನು ಶೀಘ್ರವಾಗಿ ಪೂರ್ಣಗೊಳಿಸಿ, ಇಲಾಖೆಗೆ ವಹಿಸಿಕೊಡಬೇಕೆಂದು ಲೋಕೋಪಯೋಗಿ ಇಲಾಖೆಯನ್ನು ಒತ್ತಾಯಿಸಲಾಗುತ್ತಿದೆ.

ಮೂಡಿಗೆರೆ ತಾಲ್ಲೂಕಿನ ರೈತರಿಗೆ ಪರಿಹಾರ ನೀಡುವ ಬಗ್ಗೆ

749 - ಶ್ರೀಮತಿ ಮೋಟಮ್ಮ (ಮೂಡಿಗೆರೆ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಸಾರಿ ಮೂಡಿಗೆರೆ ತಾಲ್ಲೂಕಿನಲ್ಲಿ ಬಿದ್ದ ತುಂಬ ಮಳೆಯಿಂದಾಗಿ ನಾಟಿ ಮಾಡಿದ್ದ ಭತ್ತದ ಸಸಿ ನಾಟಿಯಲ್ಲಿಯೇ ಕೊಳೆತು ತುಂಬ ಜನರಿಗೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಪರಿಹಾರ ಕ್ರಮವನ್ನೇಕೆ ಕೈಗೊಂಡಿರುವುದಿಲ್ಲ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ಮೂಡಿಗೆರೆ ತಾಲ್ಲೂಕಿನಲ್ಲಿ ಆಗಸ್ಟ್ 1990ರಲ್ಲಿ ಬಿದ್ದ ಭಾರಿ ಮಳೆಯಿಂದ ನಾಟಿ ಮಾಡಿದ ಭತ್ತದ ಸಸಿಗಳಿಗೆ ಹಾನಿ ಉಂಟಾಗಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಕೊಳ್ಳೇಗಾಲ ಟೌನಿಗೆ ಕುಡಿಯುವ ನೀರು ಸರಬರಾಜು

133 - ಶ್ರೀ ಎಂ. ಸಿದ್ದಮಾದಯ್ಯ (ಕೊಳ್ಳೇಗಾಲ) : ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲದ ಪಟ್ಟಣಕ್ಕೆ ಕಾವೇರಿ ನದಿಯಿಂದ ಕುಡಿಯುವ ನೀರಿನ ಸರಬರಾಜು ಮಾಡುವ ಯೋಜನೆಯು ಸರ್ಕಾರದ ಮುಂದೆ ಇರುವುದು ನಿಜವೇ ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ?

ಆ) ಈ ಬಗ್ಗೆ 3-4 ತಿಂಗಳಲ್ಲಿ ಈ ಕಾಮಗಾರಿಯನ್ನು ಕೈಗೊಳ್ಳುವುದಾಗಿ ಭರವಸೆ ನೀಡಿರುವುದು ನಿಜವಲ್ಲವ, ಹಾಗಿದ್ದಲ್ಲಿ, ಈ ಬಗ್ಗೆ ಯಾವುದೇ ಕ್ರಮವನ್ನು ಕೈಗೊಳ್ಳದಿರಲು ಕಾರಣವೇನು?

ಇ) ಈ ಯೋಜನೆಯನ್ನು ಯಾವಾಗ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುತ್ತದೆ?

ಶ್ರೀ ಕೆ. ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಇಲ್ಲ

ಆ) ಇಲ್ಲ

ಇ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಪ್ರಸ್ತಾವನೆಯು ಬಂದ ನಂತರ ಸರ್ಕಾರವು ಪರಿಶೀಲಿಸುತ್ತದೆ.

ಆಕ್ಟ್ರಾಯ್ ಪದ್ಧತಿಯನ್ನು ರಾಜ್ಯದಲ್ಲಿ ಪುನಃ ಜಾರಿಗೆ ತರುವ ವಿಚಾರ

517 - ಶ್ರೀ ಶಿವಾನಂದ ಎಚ್. ಕೌಜಲಗಿ, (ಬೈಲಹೊಂಗಲ): ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಕ್ಟ್ರಾಯ್ ಪದ್ಧತಿಯನ್ನು ಪುನಃ ಜಾರಿಗೆ ತರುವ ವಿಚಾರ ಸರಕ್ಕಾರಕ್ಕಿದೆಯೆ?